**File No.AGRI-AAE/25/2019-AGRI_PLAN_B-AGRICULTURE Secretariat**

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮದಡಿ 2018-19ನೇ ಸಾಲಿನಲ್ಲಿ ಉಳಿಕೆಯಾದ ಹಾಗು ಬಿಡುಗಡೆ ಮಾಡದೇ ಉಳಿದ ಅನುದಾನವನ್ನು ಮರು ಮೌಲ್ಯೀಕರಿಸಿ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ**

1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2019, ದಿನಾಂಕ: 02.04.2018.
2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:.11-7/2017- RFS-III, ದಿನಾಂಕ:30-04-2019
3. ಕೃಷಿ ಆಯುಕ್ತರ ಪತ್ರ ಸಂ: ಉಕೃನಿ/ ಕೃಯಾಂ&ಸೂನೀ/ಸೂನೀ PMKSY/ಅ.ಬಿ/2019-20, ದಿ:14/21-05-2019.

**ಪ್ರಸ್ತಾವನೆ:**

2019-20ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ **ಸೂಕ್ಷ್ಮ** ನೀರಾವರಿ ಕಾರ್ಯಕ್ರಮ ಲೆಕ್ಕ **ಶೀರ್ಷಿಕೆ:** 2401-00-108-1-15 ರಡಿ ಒಟ್ಟು ರೂ. 36818.00 ಲಕ್ಷ ಅನುದಾನವನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿರುತ್ತದೆ.

| ಕ್ರಸಂ | ಉಪ ಶೀರ್ಷಿಕೆ | ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1. | 059 | 50.00 |
| 2. | 106 | 24350.00 |
| 3. | 422 | 6500.00 |
| 4. | 423 | 2700.00 |
| 5. | 436 | 3218.00 |
| | **ಒಟ್ಟು** | **36818.00** |

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮವನ್ನು 2019-20ನೇ ಸಾಲಿನಲ್ಲಿಯೂ ಮುಂದುವರೆಸಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರ ದಿನಾಂಕ: 30-04-2019ಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ 2018-19ನೇ ಸಾಲಿನಲ್ಲಿ ಉಳಿಕೆಯಾದ ಹಾಗೂ ಬಿಡುಗಡೆ ಮಾಡದೇ ಉಳಿದಿದ್ದ ಅನುದಾನವನ್ನು ಮರುಮೌಲ್ಯೀಕರಣಗೊಳಿಸಿ 2019-20ನೇ ಸಾಲಿನಲ್ಲಿ ಒದಗಿಸಿರುವ ಅನುಮೋದಿತ ಕಾರ್ಯಕ್ರಮಕ್ಕೆ ಬಳಸಿಕೊಳ್ಳಲು ಅನುಮತಿಯನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ (3)ರ ಕೃಷಿ ಆಯುಕ್ತರ ಪತ್ರದಲ್ಲಿ 2018-19ನೇ ಸಾಲಿನಲ್ಲಿ ಉಳಿಕೆಯಾಗಿದ್ದ ಹಾಗೂ ಬಿಡುಗಡೆ ಮಾಡದೇ ಉಳಿದಿದ್ದ ಮರುಮೌಲ್ಯೀಕರಿಸಿರುವ ರೂ. 69.9617 ಕೋಟಿಗಳ (ಕೇಂದ್ರದ ಪಾಲು 25.7165 ಕೋಟಿ ಮತ್ತು ರಾಜ್ಯದ ಪೂರಕ ಅನುದಾನ 44.2452 ಕೋಟಿ) ಅನುದಾನವನ್ನು ಬಿಡುಗಡೆಗೊಳಿಸುವಂತೆ ಕೋರಲಾಗಿರುತ್ತದೆ.

File No.AGRI-AAE/25/2019-AGRI_PLAN_B-AGRICULTURE Secretariat

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಪ್ರಸ್ತುತ ಆಯವ್ಯಯದಲ್ಲಿ ಲಭ್ಯವಿರುವ ಅನುದಾನದಿಂದ ಮರುಮೌಲ್ಯೀಕೃತ ಅನುದಾನ ಬಿಡುಗಡೆ ಮಾಡಲು ಅನುವಾಗುವಂತೆ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 25 ಕೃಕೈಉ 2019, ಬೆಂಗಳೂರು, ದಿನಾಂಕ: 28.06.2019.**

2019–20ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ: 2401–00–108–1–15 ಅಡಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮ ಅನುಷ್ಠಾನಕ್ಕೆ ಒದಗಿಸಲಾಗಿರುವ ಅನುದಾನದಲ್ಲಿ 2018–19ನೇ ಸಾಲಿನಲ್ಲಿ ಉಳಿಕೆಯಾಗಿ ಹಾಗೂ ಬಿಡುಗಡೆಯಾಗದೇ ಉಳಿದಿರುವ ಮರುಮೌಲ್ಯೀಕೃತ ಅನುದಾನ ರೂ. 6986.41 ಲಕ್ಷಗಳನ್ನು (ಆರು ಸಾವಿರದ ಒಂಬೈನೂರ ಎಂಬತ್ತಾರು ಲಕ್ಷದ ನಲವತ್ತೊಂದು ಸಾವಿರ ರೂಪಾಯಿಗಳು ಮಾತ್ರ) ಈ ಕೆಳಕಂಡಂತೆ ಉಪ ಶೀರ್ಷಿಕೆವಾರು ಬಿಡುಗಡೆ ಮಾಡುತ್ತಾ, ಕೇಂದ್ರ ಹಾಗೂ ರಾಜ್ಯದ ಪಾಲಿನ ಅನುದಾನದ ಅನುಪಾತವನ್ನು ನಿಗಧಿತ ಪ್ರಮಾಣದಲ್ಲಿ ಹಂಚಿಕೆ ಮಾಡಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

(ರೂ. ಲಕ್ಷಗಳಲ್ಲಿ)

| ವಿವರ | ಲೆಕ್ಕ ಶೀರ್ಷಿಕೆ | | ಒಟ್ಟು ಬಿಡುಗಡೆ |
|---|---|---|---|
| ಮರುಮೌಲ್ಯೀಕರಣ ಮೊತ್ತ | 2401–00–108–1–15 | **ಇತರೆ 059** | 50.00 |
| | | **ಸಾಮಾನ್ಯ 106** | 641.13 |
| | | **ಪ.ಜಾ 422** | 5095.36 |
| | | **ಪ.ಪಂ 423** | 1199.92 |
| **ಬಿಡುಗಡೆ ಮಾಡಲಾದ ಒಟ್ಟು ಮರು ಮೌಲ್ಯೀಕರಣ ಮೊತ್ತ** | | | **6986.41** |

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗಿಂದ್ದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್.ಡಿ/01/ಟಿಎಫ್‌ಪಿ/2019 ದಿ:03–04–2019 ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 09 ಆಂಆಸ 2019, ದಿನಾಂಕ:15.06.2019 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

28/6

**ಇವರಿಗೆ:–**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

--

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು.
8. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
9. ಆಯುಕ್ತರು,/ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
10. ಆಯುಕ್ತರು,/ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
11. ಆಯುಕ್ತರು,/ ನಿರ್ದೇಶಕರು, ರೇಷ್ಮೆ ಇಲಾಖೆ, ಬೆಂಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
14. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
15. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
16. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ- 4&5), ಆರ್ಥಿಕ ಇಲಾಖೆ, ಬೆಂಗಳೂರು
17. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
18. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.